# ಮಾಸ ಭವಿಷ್ಯ

**ಅರುಣ ಪಿ. ಭಟ್**



**ಮೇಷ:** ಬೇರೆಯವರ ಮಾತು ನಂಬಿ ವ್ಯವಹಾರದಲ್ಲಿ ನಷ್ಟವಾಗುವ ಸಾಧ್ಯತೆ ಇದೆ, ಎಚ್ಚರದಿಂದಿರಿ. ಸಹೋದರರ ವಿಶ್ವಾಸ ಪಡೆಯಿರಿ. ಹಳೆಯ ವ್ಯಾಜ್ಯಗಳು ಪರಿಹಾರವಾಗುವವು. ಸಂಗಾತಿ ಜತೆಗಿನ ಬಾಂಧವ್ಯ ಉತ್ತಮವಾಗಿರುತ್ತದೆ. ದಾಖಲೆ ಪತ್ರಗಳನ್ನು ಎಚ್ಚರಿಕೆಯಿಂದ ಇಟ್ಟುಕೊಳ್ಳಿ. ಶುಭ: 10,16,20 ಅಶುಭ: 11,19,24.



**ವೃಷಭ:** ಬ್ಯಾಂಕ್ ವ್ಯವಹಾರಗಳು ಯೋಜನೆಯಂತೆ ನಡೆಯಲಿವೆ. ಕಷ್ಟದ ಕಾರ್ಯಗಳನ್ನು ಅನಾಯಾಸವಾಗಿ ಮಾಡುವಿರಿ. ಕುಟುಂಬದಲ್ಲಿ ಶುಭಸುದ್ದಿ. ಅವಿವಾಹಿತರಿಗೆ ವಿವಾಹ ಯೋಗ. ಪ್ರೀತಿಪಾತ್ರರಿಗೆ ಉಡುಗೊರೆ ನೀಡುವಿರಿ. ವೈಯಕ್ತಿಕ ಜೀವನದಲ್ಲಿ ಭಿನ್ನಾಭಿಪ್ರಾಯ ತಲೆದೋರಲಿದೆ. ಶುಭ: 14,19,26 ಅಶುಭ: 12,18,28.



**ಮಿಥುನ:** ಆತ್ಮೀಯ ವ್ಯಕ್ತಿಗಳೊಡನೆ ವಿವಾದಗಳು ಹೆಚ್ಚಾಗಬಹುದು. ಭೂಮಿಗೆ ಸಂಬಂಧಪಟ್ಟ ವ್ಯಾಜ್ಯಗಳಿಂದ ಕಿರಿಕಿರಿ. ಅನಗತ್ಯವಾಗಿ ಮಾತುಗಳು ಬೇಡ. ಕೆಲಸದ ವಿಷಯದಲ್ಲಿ ಸಮಸ್ಯೆಗಳು ಎದುರಾದಾಗ ಆ ಕ್ಷಣದಲ್ಲೇ ಬಗೆಹರಿಸಿ. ದೈಹಿಕ ಮತ್ತು ಮಾನಸಿಕ ಚೈತನ್ಯ ಕಾಪಾಡಿಕೊಳ್ಳಿ. ಶುಭ: 10,14,27 ಅಶುಭ: 12,16,29.



**ಕರ್ಕ:** ಯೋಜಿತ ಕಾರ್ಯಗಳಲ್ಲಿ ವ್ಯವಸ್ಥಿತವಾದ ಕಾರ್ಯಶೈಲಿ ಕಂಡುಬರುತ್ತದೆ. ಧನಾಗಮನ ಸರಾಗವಾಗಿಲಿದೆ. ಲೇವಾದೇವಿ ವ್ಯವಹಾರಗಳಿಂದ ದೂರವಿರುವುದು ಲೇಸು. ಕುಟುಂಬದ ಜೊತೆಗೆ ಹೆಚ್ಚಿನ ಕಾಲ ಕಳೆಯಲಿದ್ದೀರಿ. ಮುಂಬರುವ ದಿನಗಳಲ್ಲಿ ಸಕಾರಾತ್ಮಕ ಅವಕಾಶಗಳು ಬರಲಿವೆ. ಶುಭ: 10,13,19 ಅಶುಭ: 12,15,26.



**ಸಿಂಹ:** ಜನಪ್ರಿಯತೆ ಹೆಚ್ಚಾದಂತೆ ವಿರೋಧಿಗಳು ಹೆಚ್ಚಾಗಲಿದ್ದಾರೆ. ನಿಮ್ಮ ಕಾರ್ಯಗಳಿಗೆ ತೊಂದರೆ ನೀಡುವ ವ್ಯಕ್ತಿಗಳನ್ನು ಗುರುತಿಸಿ ದೂರವಿಡಿ. ವೈಯಕ್ತಿಕ ವಿಚಾರಗಳನ್ನು ಯಾರೊಂದಿಗೂ ಹಂಚಿಕೊಳ್ಳಬೇಡಿ. ಈ ತಿಂಗಳಲ್ಲಿ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರಲಿವೆ. ಶುಭ. 11,15,22 ಅಶುಭ: 10,18,27.



**ಕನ್ಯಾ:** ಹೊಸ ಆದಾಯ ಮಾರ್ಗ ಕಂಡುಬರಲಿದೆ. ಹೊಸದಾಗಿ ಆರಂಭಿಸಿರುವ ಉದ್ಯೋಗ ಭರವಸೆಯ ಮಹಾಪೂರವನ್ನೇ ತರಲಿದೆ. ಅನಪೇಕ್ಷಿತ ಖರ್ಚುಗಳಿಗೆ ಕಡಿವಾಣ ಹಾಕಿ. ನಿಮ್ಮ ವರ್ಚಸ್ಸು ಹಾಳು ಮಾಡಲು ವಿರೋಧಿಗಳು ಪ್ರಯತ್ನಿಸುತ್ತಾರೆ, ಎಚ್ಚರಿಕೆಯಿಂದಿರಿ. ಶುಭ: 12,19,28 ಅಶುಭ: 15,18,29.



**ತುಲಾ:** ವ್ಯವಹಾರದ ನಿಮಿತ್ತ ತಿರುಗಾಟ ಹೆಚ್ಚಾಗಬಹುದು. ಸಾಲದ ಬಾಧೆಯಿಂದ ಸಂಕಷ್ಟ. ಕಟ್ಟಡ ಕಾಮಗಾರಿಗಳಲ್ಲಿ ಹಣಕಾಸಿನ ಕುಂದುಕೊರತೆ ಕಾಡಲಿದೆ. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ನೀವು ಹಾಕಿದ ಶ್ರಮಕ್ಕೆ ಉತ್ತಮ ಫಲಿತಾಂಶ ಸಿಗಲು ಶುರುವಾಗುತ್ತದೆ. ಶುಭ. 14,16,22 ಅಶುಭ. 15,23,27.



**ವೃಶ್ಚಿಕ:** ಆರ್ಥಿಕವಾಗಿ ಪ್ರಬಲರಾಗುವ ಸಾಧ್ಯತೆ. ವಿದ್ಯಾರ್ಥಿಗಳಿಗೆ ಉತ್ತಮ ಸಮಯ. ಖರ್ಚನ್ನು ನಿಯಂತ್ರಿಸಿ. ತಿಂಗಳಂತ್ಯಕ್ಕೆ ಹಲವು ಅವಕಾಶಗಳು ಏಕಕಾಲಕ್ಕೆ ದೊರೆಯುತ್ತವೆ. ಉದ್ಯೋಗಸ್ಥರು ಹಾಗೂ ವ್ಯಾಪಾರಸ್ಥರ ಬೆಳವಣಿಗೆಗೆ ಸಾಕಷ್ಟು ಅವಕಾಶಗಳು ದೊರೆಯುವ ನಿರೀಕ್ಷೆ ಇದೆ. ಶುಭ: 11,16,20 ಅಶುಭ: 12,19,25.



**ಧನು:** ಮಾನಸಿಕ ಕ್ಲೇಶಗಳು ಕಾಡಬಹುದು. ಕುಟುಂಬದಲ್ಲಿ ಅಶಾಂತಿಯ ವಾತಾವರಣ. ಕೆಲವು ವ್ಯಕ್ತಿಗಳಿಂದ ನಿಮ್ಮ ಕಾರ್ಯಗಳಲ್ಲಿ ಹಸ್ತಕ್ಷೇಪ ಕಂಡುಬರಬಹುದು. ಆರೋಗ್ಯದಲ್ಲಿ ವ್ಯತ್ಯಾಸ ಕಾಣಬಹುದು. ತಿಂಗಳ ಮಧ್ಯ ಭಾಗದಲ್ಲಿ ಅನುಕೂಲಕರವಾದ ಬೆಳವಣಿಗೆಗಳು ಉಂಟಾಗಲಿವೆ. ಶುಭ: 10,16,25 ಅಶುಭ: 13,18,29.



**ಮಕರ:** ಉದ್ಯೋಗದಲ್ಲಿ ಉತ್ತಮ ಸ್ಥಾನಮಾನ ಸಿಗಲಿದೆ. ಸಹವರ್ತಿಗಳು ನಿಮ್ಮ ಯೋಜನೆಗಳಿಗೆ ಬೆಂಬಲ ನೀಡಲಿದ್ದಾರೆ. ಸಾಹಿತ್ಯ ಕ್ಷೇತ್ರಗಳಲ್ಲಿ ಉತ್ತಮ ಮನ್ನಣೆ ಗಳಿಸಲಿದ್ದೀರಿ. ಉದ್ಯೋಗಸ್ಥರಿಗೆ ಬಡ್ತಿ ಮತ್ತು ಹೆಚ್ಚಿನ ಜವಾಬ್ದಾರಿಗಳು ಸಿಗಲಿವೆ. ಹಕ್ಕು ವಿಸ್ತರಣೆಗೆ ಅವಕಾಶವಿದೆ. ಶುಭ: 12,16,19 ಅಶುಭ: 16,19,28.



**ಕುಂಭ:** ಅಪರಿಚಿತ ವ್ಯಕ್ತಿಗಳಿಂದ ನಷ್ಟ. ನಂಬಿಕೆದ್ರೋಹದಿಂದ ಎಚ್ಚರವಿರಿ. ಹಣಕಾಸಿನ ವಿಷಯದಲ್ಲಿ ಉತ್ತಮ ಬೆಳವಣಿಗೆ. ತಾಯಿಯ ಆರೋಗ್ಯ ಸಮಸ್ಯೆಯಾಗಿ ಬೇಸರ. ತಿಂಗಳ ಅಂತ್ಯದಲ್ಲಿ ನಿಮ್ಮ ಆರೋಗ್ಯ ಸಮಸ್ಯೆಗಳು ನಿವಾರಣೆಯಾಗಲಿವೆ. ದೇವತಾ ದರ್ಶನ ಮಾಡುವಿರಿ. ಶುಭ: 11,17,23 ಅಶುಭ: 13,19,26.



**ಮೀನ:** ಸ್ನೇಹಿತರೊಂದಿಗೆ ಉತ್ತಮ ಬಾಂಧವ್ಯ. ಆರ್ಥಿಕ ಸ್ಥಿತಿ ಸಾಮಾನ್ಯ. ನೀವು ಕಾರ್ಯ ನಿರ್ವಹಿಸುವ ಸಂಸ್ಥೆಯ ದೀರ್ಘಾವಧಿ ಜವಾಬ್ದಾರಿಯೊಂದನ್ನು ನೀವೇ ಪೂರ್ಣಗೊಳಿಸಲು ಒಪ್ಪಿಕೊಳ್ಳುತ್ತೀರಿ. ಉನ್ನತ ಶಿಕ್ಷಣಕ್ಕೆ ಪ್ರಯತ್ನಿಸುತ್ತಿರುವವರಿಗೆ ಅನುಕೂಲಕರ ಸಮಯ. ಶುಭ: 09,18,28 ಅಶುಭ: 12,19,25.